ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಕರ್ನಾಟಕದಲ್ಲಿ ಮುಜರಾಯಿ ದೇವಾಲಯಗಳ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಬಗ್ಗೆ

ಶ್ರೀಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

255 (394) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಮುಜರಾಯಿ ಇಲಾಖೆಯಡಿ ಎ.ಬಿ.ಸಿ.ಡಿ. ವರ್ಗದ ದೇವಸ್ಥಾನಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಮುಜರಾಯಿ ಇಲಾಖೆಯಲ್ಲಿ ಇಲ್ಲಿಯವರೆಗೆ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಈವರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ;

(ಇ) ಮುಜರಾಯಿ ಇಲಾಖೆಯಡಿಯಲ್ಲಿ ಬರುವ ಎ-ಶ್ರೇಣಿಯ ದೇವಸ್ಥಾನಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಈ) `ಎ' ಮತ್ತು `ಬಿ' ಶ್ರೇಣಿಯ ದೇವಸ್ಥಾನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯನಿರ್ವಾಹಕರ ಸಂಖ್ಯೆ ಎಷ್ಟು ಮತ್ತು ಯಾವ ಯಾವ ಕಾರ್ಯನಿರ್ವಾಹಕರ ಹುದ್ದೆಗಳು ಖಾಲಿ ಇವೆ ; (ಮಾಹಿತಿ ನೀಡುವುದು)

(ಉ) ರಾಜ್ಯದ ಎಲ್ಲಾ ಜಿಲ್ಲೆಗಳ ಎಲ್ಲಾ ವರ್ಗದ ದೇವಸ್ಥಾನಗಳ ಆಡಳಿತಾತ್ಮಕ ವಿಷಯಗಳ ಬಗ್ಗೆ ಯಾವ ಕಛೇರಿಗಳು ಆಯಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ರಾಜ್ಯದಲ್ಲಿ `ಎ' ಶ್ರೇಣಿಯ ದೇವಸ್ಥಾನಗಳು ಲೆಕ್ಕಪರಿಶೋಧಕರಿಂದ `ಆಡಿಟ್ ವರದಿ' ಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿದೆಯೇ; ಹಾಗಿದ್ದಲ್ಲಿ, ಸಲ್ಲಿಸಿದ ಮತ್ತು ಸಲ್ಲಿಸದ ದೇವಸ್ಥಾನಗಳಾವುವು ? (ಸಂಪೂರ್ಣ ಮಾಹಿತಿ ನೀಡುವುದು)